ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	121
ಮಾನ್ಯ ಸದಸ್ಯರ ಹೆಸರು	ಶ್ರೀ ರಮೇಶ್ ಗೌಡ ಹೆಚ್.ಎಂ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	ಮಾನ್ಯ ಉಪಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಉತ್ತರಿಸಬೇಕಾದ ದಿನಾಂಕ	01.02.2021

	ಪ್ರಶ್ನೆ	ಉತ್ತರ
(ಅ)	ಪ್ರಸಕ್ತ ಸಾಲಿನಲ್ಲಿ ಪದವಿ ವ್ಯಾಸಂಗಕ್ಕೆ ಸಂಬಂಧಿಸಿದಂತೆ ಕಾಲೇಜುಗಳಲ್ಲಿ ಅಂತಿಮ ದಿನಾಂಕದ ನಂತರ ವಿದ್ಯಾರ್ಥಿಗಳಿಗೆ ದಾಖಲಾತಿ ಮಾಡಿಕೊಳ್ಳಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುವುದಿಲ್ಲ.
(ಆ)	ಹಾಗಿದ್ದಲ್ಲಿ, ದಾಖಲಾತಿ ಕುರಿತಂತೆ ಅಂತಿಮ ದಿನಾಂಕವನ್ನು ನಿಗದಿಗೊಳಿಸಿದ್ದ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ಇಲ್ಲದೇ ವಿಳಂಬವಾಗಿರುವುದರಿಂದ ಅವರ ಭವಿಷ್ಯದ ವಿದ್ಯಾಭ್ಯಾಸ ಒಂದು ವರ್ಷ ವಿನಾಕಾರಣ ಹಾಳಾಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಅನ್ವಯಿಸುವುದಿಲ್ಲ.
(ಇ)	ದಾಖಲಾತಿ ವಂಚಿತ ವಿದ್ಯಾರ್ಥಿಗಳಿಗೆ ಪುನಃ ಅವಕಾಶ ಕಲ್ಪಿಸಲು ದಾಖಲಾತಿ ದಿನಾಂಕವನ್ನು ವಿಸ್ತರಿಸಲು ಸರ್ಕಾರದ ಕ್ರಮಕೈಗೊಳ್ಳುವುದೇ;	ವಿದ್ಯಾರ್ಥಿಗಳ ವ್ಯಾಸಂಗಕ್ಕಾಗಿ ದಾಖಲಾತಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯಗಳು ಈಗಾಗಲೇ ಅಂತಿಮ ದಿನಾಂಕವನ್ನು ಹಲವು ಬಾರಿ ವಿಸ್ತರಿಸಿರುತ್ತವೆ. ಮುಂದೆ ಅಗತ್ಯವಿದ್ದಲ್ಲಿ, ದಾಖಲಾತಿ ದಿನಾಂಕವನ್ನು ವಿಶ್ವವಿದ್ಯಾನಿಲಯಗಳೇ ವಿಸ್ತರಿಸಲು ಕ್ರಮಕೈಗೊಳ್ಳಲಿವೆ.
(ಈ)	ಕೋವಿಡ್ ಕಾರಣದಿಂದಾಗಿ ಜನವರಿ 31, 2021ರವರೆಗೆ ದಾಖಲಾತಿಗೆ ಅವಕಾಶ ಕಲ್ಪಿಸಿಕೊಟ್ಟು ವಿದ್ಯಾರ್ಥಿಗಳಿಗೆ ಭವ್ಯ ಭವಿಷ್ಯ ಮಾಡುವಲ್ಲಿ ಅನುಕೂಲ ಮಾಡಿಕೊಡಲಾಗುವುದೇ; (ಮಾಹಿತಿ ನೀಡುವುದು)?	

ಸಂಖ್ಯೆ: ಇಡಿ 44 ಯುಎನ್ಇ 2021

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)